**1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ಼ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.211/2025**

| | | |
|---|---|---|
| ಸಾಕ್ಷಿದಾರರ ಹೆಸರು | : ನಾಗರಾಜ್ ಬಿ.ಆರ್. | ಪ್ರಾಸಾ-7 |
| ತಂದೆಯ ಹೆಸರು | : ರಾಮೇಗೌಡ | |
| ವಯಸ್ಸು | : 51 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಪಿ.ಎಸ್.ಐ. | ದಿನಾಂಕಃ13.02.2026. |
| ವಾಸಸ್ಥಳ | : ಶೃಂಗೇರಿ ಪೋಲಿಸ್ ಠಾಣೆ. | |

**:ಮುಖ್ಯ ವಿಚಾರಣೆಃ ಪ್ರಾಜ್ಞ್ಯಾಸ.ಸ.ಅ. ರವರಿಂದ:**

ನಾನು ದಿ.12.08.2024 ರಿಂದ ದಿ.08.12.2024 ರವರೆಗೂ ಬಣಕಲ್ ಪೋಲಿಸ್ ಠಾಣೆಯಲ್ಲಿ ಪಿ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿ.25.10.2024 ರಂದು ಬಣಕಲ್ ಪೋಲಿಸ್ ಠಾಣಾ ಮೊಹರಂ.ನಂ.67/2024 ರಲ್ಲಿ ಮುಂದಿನ ತನಿಖೆಗಾಗಿ ಚಾಸ-1 ರವರಿಂದ ಕಡತವನ್ನು ಪಡೆದುಕೊಂಡು ಪರಿಶೀಲಿಸಲಾಗಿ, ಅಮಾನತ್ತು ಪಡಿಸಿಕೊಂಡ ಮಾಲುಗಳನ್ನು ದಾಳಿಗೆ ಸಹಕರಿಸಿದ ಸಿಬ್ಬಂದಿಗಳನ್ನು ಮತ್ತು ಪಂಚರುಗಳ ಹೇಳಿಕೆಯನ್ನು ಪಡೆಯಲು ಬಾಕಿ ಇರುವುದು ಕಂಡುಬಂದಿದ್ದು, ಅದೇದಿನ ದಾಳಿಗೆ ಸಹಕರಿಸಿದ ಚಾಸಾ-4 ರಿಂದ 8 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ನಂತರ ಪಂಚರಾಗಿ ಸಹಕರಿಸಿದ ಚಾಸಾ-2 ಮತ್ತು 3 ರವರ ಹೇಳಿಕೆಯನ್ನು ಪಡೆದುಕೊಂಡಿರುತ್ತೇನೆ. ದಿ.26.10.2024 ರಂದು ಅಮಾನತ್ತುಪಡಿಸಿಕೊಂಡ ಮಾಲನ್ನು ಚಾಸಾ-11 ರವರಿಗೆ ರಾಸಾಯನಿಕ ಪರೀಕ್ಷೆಗಾಗಿ ಕಳುಹಿಸಿಕೊಂಡಿರುತ್ತೇನೆ. ನಂತರ ನಾನು ವರ್ಗಾವಣೆಯಾದ ಕಾರಣ ಚಾಸಾ-13 ರವರಿಗೆ ಪ್ರಕರಣದ ಕಡತವನ್ನು ನೀಡಿರುತ್ತೇನೆ.

ಸಾಕ್ಷಿಯು ದಿ.26.10.2024 ರಂದು ಚಾಸಾ-11 ರವರಿಗೆ ಬರೆದ ಮನವಿ ಪತ್ರ ಮತ್ತು ಅದರಲ್ಲಿ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ಮನವಿ ಪತ್ರವನ್ನು ನಿಪಿ-10 ಮತ್ತು ಸಾಕ್ಷಿಯ ಸಹಿಯನ್ನು ನಿಪಿ-10(ಎ) ಎಂದು ಗುರುತಿಸಲಾಯಿತು. ಚಾಸಾ-2 ರವರು ನಿಪಿ-3 ರಂತೆ, ಚಾಸಾ-3 ರವರು ನಿಪಿ-4 ರಂತೆ ನನ್ನ ಮುಂದೆ ಹೇಳಿಕೆಯನ್ನು ನೀಡಿರುತ್ತಾರೆ. ಸಾಕ್ಷಿಯು ನ್ಯಾಯಾಲಯದ ಮುಂದೆ ಇರುವ ಎಂ.ಒ.1 ರಿಂದ 3 ನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಕೆ.ಆರ್.ಹೆಚ್. ವಕೀಲರಿಂದಃ**

ದಿ.25.10.2024 ರಂದು ಚಾಸಾ-1 ರವರಿಂದ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಅದೇರೀತಿಯಾಗಿ ಚಾಸಾ-2 ರಿಂದ 8 ರವರ ಹೇಳಿಕೆಗಳನ್ನು ಪಡೆದುಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ದಿ.26.10.2024 ರಂದು ಚಾಸಾ-11 ರವರಿಗೆ ರಾಸಾಯನಿಕ ಪರೀಕ್ಷೆಗಾಗಿ ಮುದ್ದೆಮಾಲುಗಳನ್ನು ಕಳುಹಿಸಿಕೊಟ್ಟಿರುವುದಿಲ್ಲ ಎಂದರೆ ಸರಿಯಲ್ಲ. ಅದೇರೀತಿಯಾಗಿ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾಸಾ-13 ರವರಿಗೆ ನೀಡಿರುವುದಿಲ್ಲ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ

ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.